ಬರತಕ್ಕಂಥ ರಾಜಸ್ವ ಲೆಕ್ಕದಲ್ಲಿ 189.14 ಲಕ್ಷ ರೂಪಾಯಿಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡುವುದು"

ಅಭಿಯಾಚನೆ ಕ್ರಮಾಂಕ 27 – ಕಾನೂನು

"ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31.03.2012 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಕಾನೂನು ಇಲಾಖೆಗೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡುವಲ್ಲಿ ಬರತಕ್ಕಂಥ ರಾಜಸ್ವ ಲೆಕ್ಕದಲ್ಲಿ 325.35 ಲಕ್ಷ ರೂಪಾಯಿಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡುವುದು"

ಅಭಿಯಾಚನೆ ಕ್ರಮಾಂಕ 28 – ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ

"ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31.03.2012 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆಗೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡುವಲ್ಲಿ ಬರತಕ್ಕಂಥ ರಾಜಸ್ವ ಲೆಕ್ಕದಲ್ಲಿ 378.00 ಲಕ್ಷ ರೂಪಾಯಿಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡುವುದು"

5. ಶಾಸನ ರಚನೆ

ಅ) ವಿಧೇಯಕದ ಮಂಡನೆ ಮತ್ತು ಪರ್ಯಾಲೋಚನೆ

1. ಕರ್ನಾಟಕ ಧನ ವಿನಿಯೋಗ ವಿಧೇಯಕ, 2012

ಅಧ್ಯಕ್ಷರು :– ಈಗ ವಿಧೇಯಕಗಳನ್ನು ಮಂಡಿಸುವುದು, ಮಾನ್ಯ ಮುಖ್ಯಮಂತ್ರಿಗಳು ಪ್ರಸ್ತಾವನೆಯನ್ನು ಮಂಡಿಸಬೇಕು.

ಶ್ರೀ ಡಿ. ವಿ. ಸದಾನಂದಗೌಡ (ಮುಖ್ಯಮಂತ್ರಿಗಳು) :– ಮಾನ್ಯ ಅಧ್ಯಕ್ಷರೆ,

"2012ನೇ ಸಾಲಿನ ಕರ್ನಾಟಕ ಧನವಿನಿಯೋಗ ವಿಧೇಯಕವನ್ನು ಮಂಡಿಸಲು ಅನುಮತಿಯನ್ನು ಕೋರುತ್ತೇನೆ."

ಅಧ್ಯಕ್ಷರು :– ಪ್ರಸ್ತಾವನೆ ಮಂಡಿಸಲಾಯಿತು.
ಈಗ ಪ್ರಸ್ತಾವನೆಯನ್ನು ಸಭೆಯ ಮತಕ್ಕೆ ಹಾಕುತ್ತೇನೆ.

ಪ್ರಸ್ತಾವನೆ ಹೀಗಿದೆ :

"2012ನೇ ಸಾಲಿನ ಕರ್ನಾಟಕ ಧನವಿನಿಯೋಗ ವಿಧೇಯಕವನ್ನು ಮಂಡಿಸಲು ಸಭೆಯು ಅನುಮತಿಯನ್ನು ನೀಡಬೇಕು."

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು
ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು.
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ
ಪ್ರಸ್ತಾವವು ಅಂಗೀಕೃತವಾಗಿದೆ.
ಮಾನ್ಯ ಮುಖ್ಯಮಂತ್ರಿಗಳು ಈಗ ದಯವಿಟ್ಟು ವಿಧೇಯಕವನ್ನು ಮಂಡಿಸಬೇಕು.

ಶ್ರೀ ಡಿ.ವಿ.ಸದಾನಂದಗೌಡ (ಮುಖ್ಯಮಂತ್ರಿಗಳು) :–ಮಾನ್ಯ ಅಧ್ಯಕ್ಷರೆ, "2012ನೇ ಸಾಲಿನ ಕರ್ನಾಟಕ ಧನವಿನಿಯೋಗ ವಿಧೇಯಕವನ್ನು ಮಂಡಿಸುತ್ತೇನೆ."

ಅಧ್ಯಕ್ಷರು :– ಪ್ರಸ್ತಾವನೆ ಮಂಡಿಸಲಾಗಿದೆ.

ಅನುಬಂಧ – 2

ವಿಧೇಯಕವನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

ಶ್ರೀ ಡಿ. ವಿ. ಸದಾನಂದಗೌಡ (ಮಾನ್ಯ ಮುಖ್ಯಮಂತ್ರಿಗಳು :– ಮಾನ್ಯ ಅಧ್ಯಕ್ಷರೆ,

"2012ನೇ ಸಾಲಿನ ಕರ್ನಾಟಕ ಧನವಿನಿಯೋಗ ವಿಧೇಯಕವನ್ನು ಸಭೆ ಪರ್ಯಾಲೋಚಿಸಬೇಕೆಂದು ಸೂಚಿಸುತ್ತೇನೆ."

ಅಧ್ಯಕ್ಷರು :– ಪರ್ಯಾಲೋಚನಾ ಪ್ರಸ್ತಾವವನ್ನು ಈಗ ಸಭೆಯ ಮತಕ್ಕೆ ಹಾಕುತ್ತೇನೆ.

"2012ನೇ ಸಾಲಿನ ಕರ್ನಾಟಕ ಧನವಿನಿಯೋಗ ವಿಧೇಯಕವನ್ನು ಸಭೆ ಪರ್ಯಾಲೋಚಿಸುತ್ತದೆ ಎಂಬ ವಿಷಯ ಸಭೆಯ ಮುಂದೆ ಇದೆ."

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು
ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು.
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇವೆ.
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ